ಕರ್ನಾಟಕ ಸರ್ಕಾರದ ಸಚಿವಾಲಯದ ಸೇವೆಗೆ ಸೇರಿದ ಶ್ರೀಮತಿ ಎಸ್. ವಿಶಾಲಾಕ್ಷಮ್ಮ, ಸರ್ಕಾರದ ಜಂಟಿ ಕಾರ್ಯದರ್ಶಿ, (ಉಪ ಕಾರ್ಯದರ್ಶಿ ವೃಂದದಲ್ಲಿ ಜೇಷ್ಠತಾ ಕ್ರಮ ಸಂಖ್ಯೆ : 485) ಇವರಿಗೆ ಜೇಷ್ಠತೆಯಲ್ಲಿ ಇವರಿಗಿಂತ ಕಿರಿಯರಾದ ಶ್ರೀ ಜಿ. ಚೋಮಾನಾಯಕ್ (ಉಪ ಕಾರ್ಯದರ್ಶಿ ವೃಂದದಲ್ಲಿ ಜೇಷ್ಠತಾ ಕ್ರಮ ಸಂಖ್ಯೆ : 532) ಇವರಿಗೆ ಉಪ ಕಾರ್ಯದರ್ಶಿ ಹುದ್ದೆಗೆ ಬಡ್ತಿ ನೀಡಿದ ದಿನಾಂಕ : 08–06–2005 ರಿಂದಲೇ ಪೂರ್ವಾನ್ವಯವಾಗಿ ಉಪ ಕಾರ್ಯದರ್ಶಿ ವೃಂದಕ್ಕೆ ಕರ್ನಾಟಕ ನಾಗರೀಕ ಸೇವಾ (ಆರ್.ಪಿ.ಪಿ.) ನಿಯಮಾವಳಿ 1978ರ ನಿಯಮ 2(2)ರನ್ವಯ ಬಡ್ತಿ ನೀಡಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ. ಆರ್. ವಿಜಯಾನಂದ ಶರ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–3)

ಪಿ.ಆರ್. 1422

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 160 ಎಸ್‌ಐಎಸ್ 2011, ಬೆಂಗಳೂರು, ದಿನಾಂಕ : 1ನೇ ಅಕ್ಟೋಬರ್, 2011

ಶ್ರೀ ಪಿ. ರಾಜೇಂದ್ರ ಚೋಳನ್, ಐ.ಎ.ಎಸ್., ಉಪ ವಿಭಾಗಾಧಿಕಾರಿ, ಹಾವೇರಿ ಜಿಲ್ಲೆ, ಹಾವೇರಿ, ಇವರಿಗೆ ದಿನಾಂಕ : 07-10-2011 ರಿಂದ 15-10-2011ರವರೆಗೆ ಗಳಿಕೆ ರಜೆಯನ್ನು ಮಂಜೂರು ಮಾಡಲಾಗಿದೆ.

ಶ್ರೀ ಪಿ. ರಾಜೇಂದ್ರ ಚೋಳನ್, ಐ.ಎ.ಎಸ್., ರವರು ರಜೆಯ ಮೇಲೆ ಹೋಗಿರದಿದ್ದರೆ, ಉಪ ವಿಭಾಗಾಧಿಕಾರಿ, ಹಾವೇರಿ ಜಿಲ್ಲೆ, ಹಾವೇರಿ, ಈ ಹುದ್ದೆಯಲ್ಲೇ ಸ್ಥಾನಪನ್ನರಾಗಿರುತ್ತಿದ್ದರೆಂದು ದೃಢೀಕರಿಸಿದೆ.

ಶ್ರೀ ರಾಜೇಂದ್ರ ಚೋಳನ್, ಐ.ಎ.ಎಸ್., ರವರಿಗೆ ಮೇಲ್ಕಂಡ ರಜೆ ಅವಧಿಯಲ್ಲಿ ಅವರ ಕುಟುಂಬದ ಈ ಕೆಳಕಾಣಿಸಿದ ಸದಸ್ಯರೊಂದಿಗೆ 2010-11ನೇ ಬ್ಲಾಕ್ ಅವಧಿಯಲ್ಲಿ ಸ್ವಗ್ರಾಮ ಪ್ರಯಾಣ ರಿಯಾಯಿತಿ ಸೌಲಭ್ಯವನ್ನು ಉಪಯೋಗಿಸಿಕೊಂಡು ಮದುರೈಗೆ ಹೋಗಿಬರಲು ಅನುಮತಿ ನೀಡಲಾಗಿದೆ.

ಕ್ರಮ ಸಂಖ್ಯೆ	ಹೆಸರು	ಸಂಬಂಧ
1	ಶ್ರೀ ಪಿ. ರಾಜೇಂದ್ರ ಚೋಳನ್	ಸ್ವತಃ
2	ಶ್ರೀಮತಿ ಎಂ. ದೀಪ	ಪತ್ನಿ
3	ಕು॥ ಸಾನ್ವಿ ಚೋಳನ್	ಮಗಳು

ಸದರಿ ಉದ್ದೇಶಕ್ಕಾಗಿ ತಗಲುವ ವಾಸ್ತವಿಕ ಪ್ರಯಾಣ ವೆಚ್ಚದ ಶೇಕಡ 90ರಷ್ಟು ಹಣವನ್ನು ಅಂತಿಮ ಪ್ರಯಾಣಭತ್ಯೆ ಬಿಲ್ಲಿನಲ್ಲಿ ಹೊಂದಾಣಿಕೆ ಮಾಡುವ ಷರತ್ತಿಗೆ ಒಳಪಟ್ಟು ಮುಂಗಡ ಪ್ರಯಾಣಭತ್ಯೆಯನ್ನು ಪಡೆಯಲು ಮಂಜೂರಾತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎನ್. ಶ್ರೀನಿವಾಸಮೂರ್ತಿ,

ಸರ್ಕಾರದ ಅಧೀನ ಕಾರ್ಯದರ್ಶಿ,

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-1)

ಪಿ.ಆರ್. 1423

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 158 ಎಸ್‌ಐಎಸ್ 2011, ಬೆಂಗಳೂರು, ದಿನಾಂಕ : 03ನೇ ಅಕ್ಟೋಬರ್, 2011

ಶ್ರೀ ಡಿ. ಎಸ್. ವಿಶ್ವನಾಥ್, ಭಾ.ಆ.ಸೇ., ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು ಇವರಿಗೆ ದಿನಾಂಕ : 10-10-2011 ರಿಂದ 22-10-2011ರವರೆಗೆ ಗಳಿಕೆ ರಜೆಯನ್ನು ಮಂಜೂರು ಮಾಡಲಾಗಿದೆ ಮತ್ತು ರಜೆಯ ಮುನ್ನ ದಿನಾಂಕ : 08-10-2011/09-10-2011 ಹಾಗೂ ರಜೆಯ ಕೊನೆಯಲ್ಲಿ ದಿನಾಂಕ : 23-10-2011 ಗಳಂದು ಲಭ್ಯವಿರುವ ಸಾರ್ವತ್ರಿಕ ರಜೆಗಳನ್ನು ಉಪಯೋಗಿಸಿಕೊಳ್ಳಲು ಸಹ ಅನುಮತಿ ನೀಡಿದೆ.

ಶ್ರೀ ಡಿ. ಎಸ್. ವಿಶ್ವನಾಥ್, ಭಾ.ಆ.ಸೇ., ರವರ ರಜಾ ಅವಧಿಯಲ್ಲಿ, ನಿರ್ದೇಶಕರು ಕೃಷಿ ಮಾರಾಟ ಮಂಡಳಿ, ಬೆಂಗಳೂರು, ಇವರನ್ನು ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು ಈ ಹುದ್ದೆಯ ಅಧಿಕ ಪ್ರಭಾರದಲ್ಲಿಡಲಾಗಿದೆ.

ಶ್ರೀ ಡಿ. ಎಸ್. ವಿಶ್ವನಾಥ್, ಭಾ.ಆ.ಸೇ., ರವರು ರಜೆಯ ಮೇಲೆ ಹೋಗಿರದಿದ್ದರೆ ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು ಈ ಹುದ್ದೆಯಲ್ಲೇ ಸ್ಥಾನಪನ್ನರಾಗಿರುತ್ತಿದ್ದರೆಂದು ದೃಢೀಕರಿಸಿದೆ.

ಶ್ರೀ ಡಿ. ಎಸ್. ವಿಶ್ವನಾಥ್, ಭಾ.ಆ.ಸೇ., ರವರಿಗೆ ಮೇಲ್ಕಂಡ ರಜೆ ಅವಧಿಯಲ್ಲಿ ಅವರ ಕುಟುಂಬದ ಈ ಕೆಳಕಾಣಿಸಿದ ಸದಸ್ಯರೊಂದಿಗೆ 2010-13ನೇ ಬ್ಲಾಕ್ ಅವಧಿಯಲ್ಲಿ ರಜಾ ಪ್ರಯಾಣ ರಿಯಾಯಿತಿ ಸೌಲಭ್ಯವನ್ನು ಉಪಯೋಗಿಸಿಕೊಂಡು **ಜಮ್ಮು-ಕಾಶ್ಮೀರ್‌ಗೆ** ಹೋಗಿಬರಲು ಅನುಮತಿ ನೀಡಲಾಗಿದೆ.

ಕ್ರಮ ಸಂಖ್ಯೆ	ಹೆಸರು	ಸಂಬಂಧ
1	ಶ್ರೀ ಡಿ. ಎಸ್. ವಿಶ್ವನಾಥ್,	ಸ್ವತಃ
2	ಶ್ರೀಮತಿ ಸುಶೀಲ ವಿಶ್ವನಾಥ್,	ಪತ್ನಿ
3	ಶ್ರೀ ಡಿ. ವಿ. ವಿನಾಯಕ್	ಮಗ

ಸದರಿ ಉದ್ದೇಶಕ್ಕಾಗಿ ತಗಲುವ ವಾಸ್ತವಿಕ ಪ್ರಯಾಣ ವೆಚ್ಚದ ಶೇಕಡ 90ರಷ್ಟು ಹಣವನ್ನು ಅಂತಿಮ ಪ್ರಯಾಣಭತ್ಯೆ ಬಿಲ್ಲಿನಲ್ಲಿ ಹೊಂದಾಣಿಕೆ ಮಾಡುವ ಷರತ್ತಿಗೆ ಒಳಪಟ್ಟು ಮುಂಗಡ ಪ್ರಯಾಣಭತ್ಯೆಯನ್ನು ಪಡೆಯಲು ಮಂಜೂರಾತಿ ನೀಡಲಾಗಿದೆ.

ಕೇಂದ್ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ : O.M.F.No. 14028/4/2009–Estt.(L), ದಿನಾಂಕ : 03–06–2009ರನ್ವಯ 10 ದಿನಗಳ ಗಳಿಕೆ ರಜೆಯ ನಗದೀಕರಣ ಸೌಲಭ್ಯವನ್ನು ಉಪಯೋಗಿಸಿಕೊಳ್ಳಲು ಸಹ ಅನುಮತಿ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎನ್. ಶ್ರೀನಿವಾಸಮೂರ್ತಿ,

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್. 1424 ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–1)

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 162 ಆಸೇವ 2011, ಬೆಂಗಳೂರು, ದಿನಾಂಕ : 12ನೇ ಅಕ್ಟೋಬರ್, 2011

ಈ ಕೆಳಕಂಡ ಕೆ.ಎ.ಎಸ್. (ಸೂಪರ್ ಟೈಂ ಸ್ಕೇಲ್/ಆಯ್ಕೆ ಶ್ರೇಣಿ/ಹಿರಿಯ ಶ್ರೇಣಿ/ಕಿರಿಯ ಶ್ರೇಣಿ) ಅಧಿಕಾರಿಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅವರುಗಳ ಹೆಸರಿನ ಮುಂದೆ ಸೂಚಿಸಿರುವ ಹುದ್ದೆಗಳಿಗೆ ವರ್ಗಾಯಿಸಿ ನೇಮಿಸಿದೆ.

ಕ್ರ. ಸಂ.	ಅಧಿಕಾರಿಯ ಹೆಸರು ಮತ್ತು ಪ್ರಸ್ತುತ ಹುದ್ದೆ ಶ್ರೀಮತಿ/ಶ್ರೀಯುತರು	ವರ್ಗಾಯಿಸಿ ನೇಮಿಸಲಾದ ಹುದ್ದೆ
1.	**ವಿ. ಅಶೋಕ್,** ಸೂಪರ್ ಟೈಂ ಸ್ಕೇಲ್, ಅಪರ ಆಯುಕ್ತರು, ಬಿ.ಬಿ.ಎಂ.ಪಿ., ಬೆಂಗಳೂರು	ರಿಜಿಸ್ಟ್ರಾರ್, ನ್ಯಾಷನಲ್ ಇನ್ಸಿಟ್ಯೂಟ್ ಆಫ್ ಫ್ಯಾಷನ್ ಟೆಕ್ನಾಲಜಿ, ಬೆಂಗಳೂರು – ಖಾಲಿ ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ಜವಳಿ ಸಚಿವಾಲಯ, ಭಾರತ ಸರ್ಕಾರ, ನವದೆಹಲಿ, ಇವರ ವಶಕ್ಕೆ ನೀಡಲಾಗಿದೆ.
2.	**ಹೆಚ್. ವಿ. ಆತ್ಮರಾಮಯ್ಯ,** ಸೂಪರ್ ಟೈಂ ಸ್ಕೇಲ್, ಮುಖ್ಯ ಆಡಳಿತಾಧಿಕಾರಿ, ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆ, ಬೆಂಗಳೂರು.	ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖಾ ಆಯುಕ್ತರ ಕಛೇರಿ, ಬೆಂಗಳೂರು – ಖಾಲಿ ಹುದ್ದೆ.
3.	**ಎಸ್. ರಾಜಾರಾಂ,** ಸೂಪರ್ ಟೈಂ ಸ್ಕೇಲ್, ಕಾರ್ಯದರ್ಶಿ, ಕರ್ನಾಟಕ ಮಾಹಿತಿ ಆಯೋಗ, ಬೆಂಗಳೂರು ಹುದ್ದೆಗೆ ವರ್ಗಾವಣೆ ಆದೇಶದಲ್ಲಿರುವ	ಇವರ ವರ್ಗಾವಣೆಯನ್ನು ಮಾರ್ಪಡಿಸಿ ಅವರು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಪರಿಷತ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ., ಬೆಂಗಳೂರು ಹುದ್ದೆಯಲ್ಲಿಯೇ ಮುಂದುವರಿಸಿದೆ.
4.	**ಡಿ. ಮಲ್ಲು,** ಸೂಪರ್ ಟೈಂ ಸ್ಕೇಲ್, ಆಯುಕ್ತರು, ಹಂಪಿ ವಿಶ್ವಪರಂಪರೆ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಹಂಪಿ ಹುದ್ದೆಗೆ ವರ್ಗಾವಣೆ ಆದೇಶದಲ್ಲಿರುವ	ಇವರ ವರ್ಗಾವಣೆಯನ್ನು ಮಾರ್ಪಡಿಸಿ, ವ್ಯವಸ್ಥಾಪಕ ನಿರ್ದೇಶಕರು, ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆ, ಮಂಡ್ಯ ಖಾಲಿ ಹುದ್ದೆ.

5.	**ಎಸ್. ಜಿ ವಾಲಿ,** ಆಯ್ಕೆ ಶ್ರೇಣಿ ವೃಂದಕ್ಕೆ ಬಡ್ತಿಯ ಮೇಲೆ ಆಯುಕ್ತರು, ಬಸವಕಲ್ಯಾಣ ಅಭಿವೃದ್ಧಿ ಪ್ರಾಧಿಕಾರ, ಬೀದರ್ ಹುದ್ದೆಗೆ ನೇಮಕಾತಿ ಆದೇಶದಲ್ಲಿರುವ.	ಇವರ ನೇಮಕಾತಿ ಆದೇಶವನ್ನು ಮಾರ್ಪಡಿಸಿ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ಖಾಲಿ ಹುದ್ದೆಗೆ ನೇಮಿಸಿದೆ.
6.	**ಎಂ. ಪ್ರಭಾವತಿ,** ಹಿರಿಯ ಶ್ರೇಣಿ, ಜಂಟಿ ನಿರ್ದೇಶಕರು, MGNREGA, ಆರ್.ಡಿ.ಪಿ.ಆರ್. ಇಲಾಖೆ, ಬೆಂಗಳೂರು ಹುದ್ದೆಗೆ ವರ್ಗಾವಣೆ ಆದೇಶದಲ್ಲಿರುವ	ಇವರ ವರ್ಗಾವಣೆಯನ್ನು ರದ್ದುಪಡಿಸಿ ಮುಖ್ಯ ಆಡಳಿತಾಧಿಕಾರಿ, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಹುದ್ದೆಯಲ್ಲಿಯೇ ಮುಂದುವರಿಸಿದೆ.
7.	**ಕೆ. ಎಂ. ಜಾನಕಿ,** ಹಿರಿಯ ಶ್ರೇಣಿ, ಮುಖ್ಯ ಆಡಳಿತಾಧಿಕಾರಿ, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು	ಇವರ ನೇಮಕಾತಿ ಆದೇಶವನ್ನು ಮಾರ್ಪಡಿಸಿ, ಮುಖ್ಯ ಆಡಳಿತಾಧಿಕಾರಿ, ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆ, ಬೆಂಗಳೂರು – ಶ್ರೀ ಹೆಚ್. ವಿ. ಆತ್ಮರಾಮಯ್ಯ ಇವರ ವರ್ಗಾವಣೆಯಿಂದ ತೆರವಾದ ಸ್ಥಾನದಲ್ಲಿ ನೇಮಿಸಿದೆ.
8.	**ಎಂ. ತಿಮ್ಮಪ್ಪ,** ಹಿರಿಯ ಶ್ರೇಣಿ, ಆಯುಕ್ತರು, ವಿಜಯನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ತೋರಣಗಲ್, ಬಳ್ಳಾರಿ.	ಯೋಜನಾ ನಿರ್ದೇಶಕರು, ಡಿ.ಆರ್.ಡಿ.ಎ. ಕೋಶ, ಜಿಲ್ಲಾ ಪಂಚಾಯತ್, ಬಾಗಲಕೋಟೆ – ಖಾಲಿ ಹುದ್ದೆ.
9.	**ಕೆ. ವಿದ್ಯಾಕುಮಾರಿ,** ಹಿರಿಯ ಶ್ರೇಣಿ ವೃಂದಕ್ಕೆ ಬಡ್ತಿಯ ಮೇಲೆ ಜಂಟಿ ನಿರ್ದೇಶಕರು, ಬೆಂಗಳೂರು. (KUIDFC, SFC, JN nurm, KMRP Projects Implementation), ನಗರಾಭಿವೃದ್ಧಿ ಇಲಾಖೆ, ಬೆಂಗಳೂರು ಹುದ್ದೆಗೆ ನೇಮಕಾತಿ ಆದೇಶದಲ್ಲಿರುವ.	ಇವರ ನೇಮಕಾತಿ ಆದೇಶವನ್ನು ಮಾರ್ಪಡಿಸಿ, ರಿಜಿಸ್ಟ್ರಾರ್, ಕರ್ನಾಟಕ ರಾಜ್ಯಮುಕ್ತ ವಿಶ್ವವಿದ್ಯಾಲಯ, ಮೈಸೂರು – ಖಾಲಿ ಹುದ್ದೆಗೆ ನೇಮಿಸಿದೆ.
10.	**ಜಹೀರಾ ನಸೀಂ,** ಹಿರಿಯ ಶ್ರೇಣಿ ವೃಂದಕ್ಕೆ ಬಡ್ತಿಯ ಮೇಲೆ ಮುಖ್ಯ ಆಡಳಿತಾಧಿಕಾರಿ, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ, ಹುಬ್ಬಳ್ಳಿ ಹುದ್ದೆಗೆ ನೇಮಕಾತಿ ಆದೇಶದಲ್ಲಿರುವ.	ಇವರ ನೇಮಕಾತಿ ಆದೇಶವನ್ನು ಮಾರ್ಪಡಿಸಿ, ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಯಾದಗಿರಿ – ಖಾಲಿ ಹುದ್ದೆಗೆ ನೇಮಿಸಿದೆ.
11.	**ಆರ್. ಅಲ್ಲಪ್ಪ,** ಕಿರಿಯ ಶ್ರೇಣಿ, ಉಪನಿರ್ದೇಶಕರು, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು ಹುದ್ದೆಗೆ ವರ್ಗಾವಣೆ ಆದೇಶದಲ್ಲಿರುವ.	ಇವರ ವರ್ಗಾವಣೆಯನ್ನು ರದ್ದುಪಡಿಸಿ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಆಯುಕ್ತರ ಪತ್ರಾಂಕಿತ ಸಹಾಯಕರ ಹುದ್ದೆಯಲ್ಲಿಯೇ ಮುಂದುವರಿಸಿದೆ.
12.	**ಎನ್. ಚಂದ್ರಶೇಖರ್,** ಕಿರಿಯ ಶ್ರೇಣಿ, ಆಡಳಿತಾಧಿಕಾರಿ, ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು.	ವಿಶೇಷ ಭೂಸ್ವಾಧೀನಾಧಿಕಾರಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು – ಖಾಲಿ ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ನಗರಾಭಿವೃದ್ಧಿ ಇಲಾಖೆಯ ವಶದಲ್ಲಿಯೇ ಮುಂದುವರಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎನ್. ಶ್ರೀನಿವಾಸಮೂರ್ತಿ,

ಸರ್ಕಾರದ ಅಧೀನ ಕಾರ್ಯದರ್ಶಿ,

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–1)

ಪಿ.ಆರ್. 1425

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 83 ಆಸೇವ 2011(II), ಬೆಂಗಳೂರು, ದಿನಾಂಕ : 07ನೇ ಅಕ್ಟೋಬರ್, 2011

ಅಧಿಸೂಚನೆ ಸಂಖ್ಯೆ : DPAR 2 SKG 2000 ದಿನಾಂಕ : 04-03-2006 ಹಾಗೂ ಸಂಖ್ಯೆ : DPAR 2 SKG 2009 ದಿನಾಂಕ : 03-12-2009ರಲ್ಲಿ ಪ್ರಕಟಿಸಿರುವ ಕೆ.ಎ.ಎಸ್. ಸಮೂಹ-ಎ (ಹಿರಿಯ ಶ್ರೇಣಿ) ವೃಂದದ ಅಂತಿಮ ಜೇಷ್ಠತಾ ಪಟ್ಟಿಯ ಆಧಾರದ ಮೇಲೆ ಈ ಕೆಳಕಂಡ ಕೆ.ಎ.ಎಸ್. ಸಮೂಹ-ಎ (ಹಿರಿಯ ಶ್ರೇಣಿ) ಅಧಿಕಾರಿಗಳಿಗೆ, ತಕ್ಷಣದಿಂದ ಜಾರಿಗೆ ಬರುವಂತೆ **ರೂ. 24450-31800ರ** ವೇತನ ಶ್ರೇಣಿಯ **ಕೆ.ಎ.ಎಸ್. (ಆಯ್ಕೆ ಶ್ರೇಣಿ)** ವೃಂದಕ್ಕೆ ಸ್ಥಾನಪನ್ನರಾಗಲು ಬಡ್ತಿ ನೀಡಿ, ಮುಂದಿನ ಆದೇಶದವರೆಗೆ ಅವರುಗಳ ಹೆಸರಿನ ಮುಂದೆ ಸೂಚಿಸಿರುವ ಹುದ್ದೆಗಳಿಗೆ ಸ್ಥಳನಿಯುಕ್ತಿಗೊಳಿಸಿ ನೇಮಿಸಿದೆ.

ಕ್ರ. ಸಂ.	*ಅಧಿಕಾರಿಯ ಹೆಸರು ಮತ್ತು ಪ್ರಸ್ತುತ ಹುದ್ದೆ ಶ್ರೀಮತಿ/ಶ್ರೀಯುತರು*	*ಬಡ್ತಿ ಮೇಲೆ ನೇಮಿಸಿದ ಹುದ್ದೆ*
1.	**ನಾಗಾನಾಯಕ್,** ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿ, ಮೈಸೂರು.	ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿ, ಮೈಸೂರು ಹುದ್ದೆಯಲ್ಲಿಯೇ ಮುಂದುವರಿಸಲಾಗಿದೆ.
2.	**ಜಿ. ಎಸ್. ಜಿದ್ದಿಮನಿ,** ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಿಜಾಪುರ ಜಿಲ್ಲೆ.	ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಿಜಾಪುರ ಜಿಲ್ಲೆ ಹುದ್ದೆಯಲ್ಲಿಯೇ ಮುಂದುವರಿಸಲಾಗಿದೆ.
3.	**ಕೆ. ಎನ್. ನಿಂಗಪ್ಪ,** ಮುಖ್ಯ ಆಡಳಿತಾಧಿಕಾರಿ, ಮೈಸೂರು ಸಕ್ಕರೆ ಕಂಪನಿ ಲಿಮಿಟೆಡ್, ಮಂಡ್ಯ.	ಮುಖ್ಯ ಆಡಳಿತಾಧಿಕಾರಿ, ಮೈಸೂರು ಸಕ್ಕರೆ ಕಂಪನಿ ಲಿಮಿಟೆಡ್, ಮಂಡ್ಯ ಹುದ್ದೆಯಲ್ಲಿಯೇ ಮುಂದುವರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-2)

ಪಿ.ಆರ್. 1426

ಶಿಕ್ಷಣ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಇಡಿ 205 ಡಿಟಿಇ 2010, ಬೆಂಗಳೂರು, ದಿನಾಂಕ : 04ನೇ ಅಕ್ಟೋಬರ್, 2011

ಡಾ॥ ಜ್ಯೋತಿ ಪ್ರಸಾದ್, ಇವರು ಕರ್ನಾಟಕ ಲೋಕಸೇವಾ ಆಯೋಗದಿಂದ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಖಾಲಿ ಇದ್ದ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಪ್ರಾಧ್ಯಾಪಕರ ಹುದ್ದೆಗೆ ಆಯ್ಕೆಗೊಂಡಿದ್ದು, ಸದರಿಯವರು ದಿನಾಂಕ : 13-09-2010 ರಂದು ನಡೆದ ಕೌನ್ಸಿಲಿಂಗ್‌ಗೆ ಹಾಜರಾಗಿರುವುದಿಲ್ಲ. ನಂತರ ಸರ್ಕಾರದ ಅಧಿಸೂಚನೆ ಸಂಖ್ಯೆ : ಇಡಿ 205 ಡಿಟಿಇ 2010 (ಭಾಗ) ದಿನಾಂಕ : 04-12-2010ರಲ್ಲಿ ಡಾ॥ ಜ್ಯೋತಿ ಪ್ರಸಾದ್ ರವರಿಗೆ ಸಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು ಇಲ್ಲಿಗೆ ನೇಮಕಾತಿ ಆದೇಶ ನೀಡಿ ಆದೇಶ ಸ್ವೀಕೃತವಾದ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಲು ಸೂಚಿಸಲಾಗಿತ್ತು. ಆದರೆ ಅವರು ಜಿ.ಬಿ.ಪಂತ್ ಯೂನಿವರ್ಸಿಟಿ ಆಫ್ ಅಗ್ರಿಕಲ್ಚರ್ ಮತ್ತು ಟೆಕ್ನಾಲಜಿ, ಪಾಟ್ನಾನಗರ, ಉತ್ತರ ಖಂಡ ರಾಜ್ಯ ಇಲ್ಲಿ ಸೇವೆ ಸಲ್ಲಿಸುತ್ತಿದ್ದು ಅಲ್ಲಿಯ ಕೆಲಸವು ಜೂನ್ 2011ಕ್ಕೆ ಮುಕ್ತಾಯವಾಗುವುದರಿಂದ ಕರ್ತವ್ಯಕ್ಕೆ ಹಾಜರಾಗಲು ದಿನಾಂಕ : 01-08-2011ರವರೆಗೆ ಕಾಲಾವಕಾಶವನ್ನು ನೀಡಬೇಕೆಂದು ಕೋರಿದ್ದರ ಮೇರೆಗೆ ಸರ್ಕಾರದ ಪತ್ರ ಸಂಖ್ಯೆ : ಇಡಿ 205 ಡಿಟಿಇ 2010 (ಭಾಗ) ದಿನಾಂಕ : 04-12-2010ರಲ್ಲಿ ದಿನಾಂಕ : 30-06-2011ರವರೆಗೆ ಕಾಲಾವಕಾಶವನ್ನು ನೀಡಿ, ನೀಡಿರುವ ಕಾಲಾವಕಾಶದೊಳಗೆ ಕರ್ತವ್ಯಕ್ಕೆ ಹಾಜರಾಗದಿದ್ದಲ್ಲಿ ಯಾವುದೇ ಮುನ್ಸೂಚನೆ ನೀಡದೆ ನೇಮಕಾತಿಯನ್ನು ರದ್ದುಪಡಿಸಲಾಗುವುದೆಂದು ತಿಳಿಸಲಾಗಿತ್ತು.

ಆದರೆ ಡಾ॥ ಜ್ಯೋತಿ ಪ್ರಸಾದ್ ರವರು ನಿಗದಿತ ಅವಧಿಯೊಳಗೆ ಕರ್ತವ್ಯಕ್ಕೆ ಹಾಜರಾಗಿರುವುದಿಲ್ಲ ಮತ್ತು ಅವರಿಂದ ಯಾವುದೇ ಮನವಿಯು ಸ್ವೀಕೃತವಾಗಿರುವುದಿಲ್ಲ. ಆದುದರಿಂದ, ಅವರಿಗೆ ಸರ್ಕಾರಿ ಹುದ್ದೆಯಲ್ಲಿ ಕಾರ್ಯನಿರ್ವಹಿಸಲು ಆಸಕ್ತಿ ಇಲ್ಲವೆಂದು ತೀರ್ಮಾನಿಸಿ ಸದರಿಯವರಿಗೆ ದಿನಾಂಕ : 04–12–2010ರಲ್ಲಿ ನೀಡಿದ್ದ ನೇಮಕಾತಿ ಆದೇಶವನ್ನು ಈ ತಕ್ಷಣದಿಂದಲೇ ಜಾರಿಗೆ ಬರುವಂತೆ ನಿಯಮಾನುಸಾರ ರದ್ದುಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಬಿ. ಎನ್. ಜಗದೀಶ್,

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್. 1427 ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 47 ಸೇಇವಿ 2011, ಬೆಂಗಳೂರು, ದಿನಾಂಕ : 12ನೇ ಅಕ್ಟೋಬರ್, 2011

ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 7–ರ ಉಪನಿಯಮ (1)ರ ಪರಂತುಕದನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಕರ್ನಾಟಕ ಸರ್ಕಾರ ಸಚಿವಾಲಯದ ಸಮೂಹ–ಬಿ ವೃಂದದ ಶಾಖಾಧಿಕಾರಿ ಹುದ್ದೆಗಳ ಮೊದಲ ನೇಮಕಾತಿಗೆ ಸಂಬಂಧಿಸಿದಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಯವರನ್ನು ನೇಮಕಾತಿ ಪ್ರಾಧಿಕಾರವೆಂದು ನಿರ್ದಿಷ್ಟಪಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಹೆಚ್. ಕೆ. ಲಕ್ಷ್ಮೀನಾರಾಯಣ ರಾವ್,

ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),

ಪಿ.ಆರ್. 1428 ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು–2)

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 167 ಆಸೇವ 2011(I), ಬೆಂಗಳೂರು, ದಿನಾಂಕ : 07ನೇ ಅಕ್ಟೋಬರ್, 2011

ಶ್ರೀ ಮೊಹಮ್ಮದ್ ಮೊಹಮೂದ್, ಕೆ.ಎ.ಎಸ್. ಹಿರಿಯ ಶ್ರೇಣಿ ಅಧಿಕಾರಿ, ಇವರಿಗೆ ಅಧಿಸೂಚನೆ ಸಂಖ್ಯೆ : ಸಿಆಸುಇ 83 ಆಸೇವ 2011(**III**) ದಿನಾಂಕ : 17–09–2011ರಲ್ಲಿ ಕೆ.ಎ.ಎಸ್., ಆಯ್ಕೆ ಶ್ರೇಣಿ ವೃಂದಕ್ಕೆ ಬಡ್ತಿ ನೀಡಿ ನೇಮಿಸಲಾದ ***"ಮುಖ್ಯಮಂತ್ರಿಯವರ ವಿಶೇಷಾಧಿಕಾರಿ–3",*** ಹುದ್ದೆಯನ್ನು ***"ಮುಖ್ಯ ಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಜಂಟಿ ಕಾರ್ಯದರ್ಶಿ",*** ಎಂಬುದಾಗಿ ಮರುಪದನಾಮೀಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಂ. ವಾಸುದೇವಮೂರ್ತಿ,

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್. 1429 ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–2)

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 502 ಸಅಸೇ 2011, ಬೆಂಗಳೂರು, ದಿನಾಂಕ : 12ನೇ ಅಕ್ಟೋಬರ್, 2011

ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಬಾಲ ಕಾರ್ಮಿಕ ಕೋಶ, ಕಾರ್ಮಿಕ ಇಲಾಖೆ, ಕರ್ನಾಟಕ ಸರ್ಕಾರ ಸಚಿವಾಲಯ – ಇಲ್ಲಿ ಸೇವೆ ಸಲ್ಲಿಸುತ್ತಿರುವ **ಡಾ॥ ಗಿರಿಜಾ ಹೆಚ್. ಕೊಂಗಿ,** ಇವರ ಸೇವೆಯನ್ನು ಈ ಕೂಡಲೇ ಜಾರಿಗೆ ಬರುವಂತೆ ಇವರ ಮಾತೃ ಇಲಾಖೆಯಾದ ಕಾರ್ಮಿಕ ಇಲಾಖೆಗೆ ಹಿಂದಿರುಗಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎ. ಆರ್. ವಿಜಯಾನಂದ ಶರ್ಮ,

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್. 1430 ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–3)

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 479 ಸಅಸೇ 2011, ಬೆಂಗಳೂರು, ದಿನಾಂಕ : 14ನೇ ಅಕ್ಟೋಬರ್, 2011

ಶ್ರೀ ಕಾಂತರಾಜು, ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಪ್ರಸ್ತುತ ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯತ್, ರಾಮನಗರ, ಇವರನ್ನು ಮಾನ್ಯ ಜವಳಿ ಸಚಿವರ ಆಪ್ತ ಕಾರ್ಯದರ್ಶಿಯಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮಾನ್ಯ ಸಚಿವರ ಪದಾವಧಿಯವರೆಗೆ ಅಥವಾ ಮುಂದಿನ ಆದೇಶದವರೆಗೆ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ನೇಮಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ. ಆರ್. ವಿಜಯಾನಂದ ಶರ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–3)

ಪಿ.ಆರ್. 1431

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 285 ಆಸೇಇ 2011, ಬೆಂಗಳೂರು, ದಿನಾಂಕ : 22ನೇ ಸೆಪ್ಟೆಂಬರ್, 2011

ಶ್ರೀ ಕೆ. ಪ್ರಭುದೇವ್, ಕೆ.ಎ.ಎಸ್. ಹಿರಿಯ ಶ್ರೇಣಿ ಅಧಿಕಾರಿ, ಪ್ರಸ್ತುತ ವಿಶೇಷ ಭೂಸ್ವಾಧೀನಾಧಿಕಾರಿ, ಮಲಪ್ರಭಾ ಯೋಜನೆ–3, ಧಾರವಾಡ, ಇವರಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 285(1)(ಎ)ರಡಿ ಸ್ವಇಚ್ಛಾ ನಿವೃತ್ತಿ ಹೊಂದಲು ಅನುಮತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–2)

ಪಿ.ಆರ್. 1432

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 83 ಆಸೇವ 2011, ಬೆಂಗಳೂರು, ದಿನಾಂಕ : 07ನೇ ಅಕ್ಟೋಬರ್, 2011

ಅಧಿಸೂಚನೆ ಸಂಖ್ಯೆ : DPAR 01 SKG 2010 ದಿನಾಂಕ: 03–03–2011ರಲ್ಲಿ ಪ್ರಕಟಿಸಿರುವ ಕೆ.ಎ.ಎಸ್. ಸಮೂಹ–ಎ (ಆಯ್ಕೆ ಶ್ರೇಣಿ) ವೃಂದದ ಅಂತಿಮ ಜೇಷ್ಠತಾ ಪಟ್ಟಿಯ ಆಧಾರದ ಮೇಲೆ ***ಶ್ರೀ ಎನ್. ಜಯರಾಂ,*** ಕೆ.ಎ.ಎಸ್. ಸಮೂಹ–ಎ (ಆಯ್ಕೆ ಶ್ರೇಣಿ) ಅಧಿಕಾರಿ, ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ, ಇವರಿಗೆ ತಕ್ಷಣದಿಂದ ಜಾರಿಗೆ ಬರುವಂತೆ ರೂ. 26250–36500ರ ವೇತನ ಶ್ರೇಣಿಯ ***ಕೆ.ಎ.ಎಸ್. (ಸೂಪರ್ ಟೈಂ ಸ್ಕೇಲ್)*** ವೃಂದಕ್ಕೆ ಸ್ಥಾನಪನ್ನರಾಗಲು ಬಡ್ತಿ ನೀಡಿ, ಮುಂದಿನ ಆದೇಶದವರೆಗೆ ಅವರು ಹಾಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಹುದ್ದೆಯಲ್ಲಿಯೇ ಮುಂದುವರಿಸಿ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು–2)

ಪಿ.ಆರ್. 1433

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 164 ಆಸೇವ 2011, ಬೆಂಗಳೂರು, ದಿನಾಂಕ : 07ನೇ ಅಕ್ಟೋಬರ್, 2011

ಶ್ರೀ. ಸೈಯದ್ ಅಬ್ದುಲ್‌ರಬ್, ಕೆ.ಎ.ಎಸ್. (ಆಯ್ಕೆ ಶ್ರೇಣಿ), ಅಪರ ಆಯುಕ್ತರು (ಭೂಮಿ ನಿರ್ವಹಣೆ ಯೋಜನೆ ಮತ್ತು ಇತರೆ), ಪ್ರಾದೇಶಿಕ ಆಯುಕ್ತರ ಕಛೇರಿ, ಗುಲ್ಬರ್ಗ, ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗ ಹುದ್ದೆಯಲ್ಲಿ ಹೆಚ್ಚುವರಿ ಪ್ರಭಾರದಲ್ಲಿರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-2)

ಪಿ.ಆರ್. 1434

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ತಿದ್ದುಪಡಿ

ಸಂಖ್ಯೆ: ಸಿಆಸುಇ 167 ಆಸೇವ 2011, ಬೆಂಗಳೂರು, ದಿನಾಂಕ : 07ನೇ ಅಕ್ಟೋಬರ್, 2011

ಡಾ॥ ಅರುಂಧತಿ ಚಂದ್ರಶೇಖರ್, ಕೆ.ಎ.ಎಸ್. ಕಿರಿಯ ಶ್ರೇಣಿ ಅಧಿಕಾರಿ, ಇವರಿಗೆ ಅಧಿಸೂಚನೆ ಸಂಖ್ಯೆ : ಸಿಆಸುಇ 83 ಆಸೇವ 2011(III) ದಿನಾಂಕ : 17-09-2011ರಲ್ಲಿ ಕೆ.ಎ.ಎಸ್. ಹಿರಿಯ ಶ್ರೇಣಿ ವೃಂದಕ್ಕೆ ಬಡ್ತಿ ನೀಡಿ ನೇಮಿಸಲಾದ **"ಉಪ ನಿರ್ದೇಶಕರು"**, ನ್ಯಾಷನಲ್ ರೂರಲ್ ಹೆಲ್ತ್ ಮಿಷನ್ (NRHM), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ಹುದ್ದೆಯನ್ನು **"ಮುಖ್ಯ ಆಡಳಿತಾಧಿಕಾರಿ"**, ನ್ಯಾಷನಲ್ ರೂರಲ್ ಹೆಲ್ತ್ ಮಿಷನ್ (NRHM), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ಎಂಬುದಾಗಿ ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-2)

ಪಿ.ಆರ್. 1435

HIGH COURT OF KARNATAKA

NOTIFICATION

No. GOB(I) 3/2011, Bangalore, Dated 20th October, 2011.

The Presiding Officers of the Courts mentioned at Column No. 1, below, are concurrently appointed as the Presiding Officers of the Courts mentioned at Column No. 2, with effect from 17-10-2011 and until further orders :-

Designation of the Presiding Officer	Name of the Courts to which concurrent appointment is made
(1)	**(2)**
1. Prl. Civil Judge, Davanagere	Addl. Civil Judge, Davanagere (who is in concurrent charge of the court of Civil Judge and JMFC., Jagalur, with a direction to itinerate the said court for three days in a week)
2. JMFC II Court, Davanagere.	JMFC Court, Davanagere.
	Civil Judge and JMFC., Honnali (on Civil side)
3. Senior Civil Judge, Harihara	Civil Judge and JMFC., Honnali (on Criminal and Administration side.)

BY ORDER OF THE HIGH COURT,
P. KRISHNA BHAT,
REGISTRAR GENERAL

P.R. 1436

HIGH COURT OF KARNATAKA

NOTIFICATION

No. GOB(I) 3/2011, Bangalore, Dated 22nd October, 2011.

The Presiding Officers of the Courts mentioned at Column No. 1, below, are concurrently appointed as the Presiding Officers of the Courts mentioned at Column No. 2, with effect from 17-10-2011 and until further orders :-

Designation of the Presiding Officer	Name of the Courts to which concurrent appointment is made
(1)	**(2)**
1. Addl. Civil Judge and JMFC II Court, Bidar	II Addl. Civil Judge and JMFC II Court, Bidar
	Civil Judge and JMFC., Aurad. **(Vacant Court)**
2. Prl. Civil Judge and JMFC II Court, Bidar	Civil Judge and JMFC, Bhalki.
3. Civil Judge and JMFC, Humnabad.	Civil Judge and JMFC, Basavakalyan

BY ORDER OF THE HIGH COURT,

P. KRISHNA BHAT,

REGISTRAR GENERAL

P.R. 1437

HIGH COURT OF KARNATAKA

NOTIFICATION

No. GOB(I) 3/2011, Bangalore, Dated 21st October, 2011.

In partial modification of this office notification of even number dated 17-09-2010, the itinerary arrangement made to the court of Civil Judge and JMFC., Yelandur by the Presiding Officer of the court of Addl. Civil Judge and JMFC., Kollegal is cancelled with immediate effect.

BY ORDER OF THE HIGH COURT,

P. KRISHNA BHAT,

REGISTRAR GENERAL

P.R. 1438

HIGH COURT OF KARNATAKA

NOTIFICATION

No. GOB(I) 3/2011, Bangalore, Dated 18th October, 2011.

In partial modification of this office Notification No. GOB (I) 4(3)/2011 dated 08-06-2011, the Presiding Officer of the court of Civil Judge and JMFC., Haliyal who is in concurrent charge of the court of Civil Judge and JMFC., Dandeli (Vacant Court) is directed to itinerate the said court for three days in a week on every working Thursday, Friday and Saturday, with immediate effect and until further orders.

BY ORDER OF THE HIGH COURT,

P. KRISHNA BHAT,

REGISTRAR GENERAL

P.R. 1439

HIGH COURT OF KARNATAKA

NOTIFICATION

No. GOB(I) 3/2011, Bangalore,, Dated 20th October, 2011.

The Presiding Officer of the Court of Senior Civil Judge and CJM., Gadag, is concurrently appointed as the Presiding Officers of the Court of Civil Judge and JMFC., Laxmeshwar, with effect from 17-10-2011 and until further orders.

BY ORDER OF THE HIGH COURT,

P. KRISHNA BHAT,

P.R. 1440 REGISTRAR GENERAL

HIGH COURT OF KARNATAKA

NOTIFICATION

No. GOB(I) 3/2011, Bangalore, Dated 20th October, 2011.

The Presiding Officers of the Courts mentioned at Column No.1, below, are concurrently appointed as the Presiding Officers of the Courts mentioned at Column No. 2, with effect from 17-10-2011 and until further orders :-

Designation of the Presiding Officer	Name of the Courts to which concurrent appointment is made
(1)	(2)
1. Prl. Civil Judge and JMFC., Dharwad.	Addl. Civil Judge and JMFC., Dharwad. (who is in concurrent charge of the court of Civil Judge and JMFC., Kalaghatgi)
2. II Addl. Civil Judge and JMFC II Court, Dharwad	III Addl. Civil Judge and JMFC., Dharwad.
3. II Addl. Civil Judge and JMFC III Court, Hubli.	III Addl. Civil Judge, Hubli.
4. Addl. Civil Judge, Hubli.	JMFC I Court, Hubli.
5. II Addl. Civil Judge and JMFC II Court, Dharwad	Civil Judge and JMFC., Navalgund.

BY ORDER OF THE HIGH COURT,

P. KRISHNA BHAT,

P.R. 1441 REGISTRAR GENERAL

HIGH COURT OF KARNATAKA

NOTIFICATION

No. GOB(I) 28/2001, Bangalore, Dated 21st October, 2011.

In pursuance to Rule 118-A(1) of K.C.S.Rs., sanction is hereby accorded for payment of cash equivalent of leave salary for Earned Leave at the credit of Sri. Shivananda Katti, Ad-hoc. District Judge (then working as Presiding Officer, Fast Track Court-I, Bidar), subject to maximum of 240 days, on the date of his attaining the age of superannuation i.e., on 30-06-2004. It is certified that no Departmental Enquiry was pending against the said Officer, as on that date.

BY ORDER OF THE HIGH COURT,

P. KRISHNA BHAT,

P.R. 1442 REGISTRAR GENERAL

HIGH COURT OF KARNATAKA

NOTIFICATION

No. GOB(I) 246/2007, Bangalore, Dated 18th October, 2011.

It is hereby notified that the court of the XXXVI Addl. City Civil and Sessions Judge, Bangalore, functioning at City Civil Court Complex, Bangalore, is shifted to the Special Court Hall, situated near Parappana Agrahara, Bangalore, with effect from 20-10-2011 and until further orders.

BY ORDER OF THE HIGH COURT,

P. KRISHNA BHAT,

P.R. 1443 REGISTRAR GENERAL

HIGH COURT OF KARNATAKA

NOTIFICATION

No. HCE 922/2011, Bangalore, Dated 14th October, 2011.

Sri S. Ramanatha, Section Officer of this office is permitted to retire from service on attaining the age of superannuation w.e.f. the afternoon of 31-10-2011 and he will be relieved of his duties in this office on the afternoon of 31-10-2011

BY ORDER OF HON'BLE THE ACTING CHIEF JUSTICE,
K. SOMASHEKAR,
REGISTRAR (JUDICIAL)

P.R. 1444

KARNATAKA GOVERNOR'S SECRETARIAT

NOTIFICATION

No. GS 9 KPM 2011, Bangalore, Dated 26th October, 2011.

In exercise of the powers conferred by Section 22 of the Karnataka State Universities Act, 2000, I, H. R. BHARDWAJ, Governor of Karnataka and Chancellor of Universities in Karnataka, hereby appoint Prof. C. S. Shivakumaraswamy, Professor in Kannada, Kuvempu University, Shankaraghatta, as the Director of Students Welfare, Kuvempu University, for a period of three years from the date of this Notification.

Sd/-
H. R. BHARDWAJ,
Governor of Karnataka and
Chancellor of Universities.

P.R. 1445

ತೋಟಗಾರಿಕೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ತೋಇ 39 ರೇಉನಿ 2011, ಬೆಂಗಳೂರು, ದಿನಾಂಕ : 17ನೇ ಅಕ್ಟೋಬರ್, 2011

ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ಅರ್ಟಿಕಲ್ ಆಫ್ ಅಸೋಸಿಯೇಷನ್‌ನ ನಿಯಮ 8(ಎ)ರಡಿಯಲ್ಲಿ ಪ್ರದತ್ತವಾದ ಅಧಿಕಾರದನ್ವಯ ಈ ನಿಗಮದ ನಿರ್ದೇಶಕರ ಮಂಡಳಿಯಲ್ಲಿ ನಿರ್ದೇಶಕರಾಗಿರುವ ಶ್ರೀಮತಿ ಎಂ. ಸತ್ಯವತಿ, ಭಾಅಸೇ., ಹಿಂದಿನ ಸದಸ್ಯ ಕಾರ್ಯದರ್ಶಿ, ಕೇಂದ್ರೀಯ ರೇಷ್ಮೆ ಮಂಡಳಿ ಇವರ ಸ್ಥಾನದಲ್ಲಿ ಶ್ರೀಮತಿ ಇಶಿತಾ ರಾಯ್, ಭಾಅಸೇ., ಸದಸ್ಯ ಕಾರ್ಯದರ್ಶಿ, ಕೇಂದ್ರೀಯ ರೇಷ್ಮೆ ಮಂಡಳಿ ಇವರನ್ನು ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ನಿರ್ದೇಶಕರ ಮಂಡಳಿಗೆ ನಿರ್ದೇಶಕರನ್ನಾಗಿ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಬಿ. ಎಸ್. ಚಂದ್ರಶೇಖರ್,
ಪೀಠಾಧಿಕಾರಿ,
ತೋಟಗಾರಿಕೆ ಇಲಾಖೆ (ರೇಷ್ಮೆ)

ಪಿ.ಆರ್. 1446

ಸಾರಿಗೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಾರಿಇ 227 ಸಾಇಪ 2010, ಬೆಂಗಳೂರು, ದಿನಾಂಕ : 18ನೇ ಅಕ್ಟೋಬರ್, 2011

ಕೇಂದ್ರ ಸರ್ಕಾರದ ಭೂ–ಸಾರಿಗೆ ಮತ್ತು ಹೆದ್ದಾರಿಗಳ ಮಂತ್ರಾಲಯದ ಅಧಿಸೂಚನೆ ಸಂಖ್ಯೆ : S.O. 444(E), ದಿನಾಂಕ : 12–06–1989 ಹಾಗೂ ಅಧಿಸೂಚನೆ ಸಂಖ್ಯೆ : S.O.1705, ದಿನಾಂಕ: 12–06–1989ರ ಅನ್ವಯ ಕರ್ನಾಟಕ ಸರ್ಕಾರವು ಈ ಕೆಳಕಂಡಂತೆ ಅಂಕಣ (3)ರಲ್ಲಿ ನಮೂದಿಸಿರುವ ಪ್ರಕಾರ ನೋಂದಣಿ ಸೂಚಿ ಸಂಖ್ಯೆಯನ್ನು ಅಂಕಣ (2)ರಲ್ಲಿ ತಿಳಿಸಿದ ನೋಂದಣಿ ಪ್ರಾಧಿಕಾರಕ್ಕೆ ಕರ್ನಾಟಕ ರಾಜ್ಯದಲ್ಲಿ ನೋಂದಣಿ ಸೂಚಿ ಸಂಖ್ಯೆಯಾಗಿ ಉಪಯೋಗಿಸಲು ಹಂಚಿಕೆ ಮಾಡಲಾಗಿದೆ. ಈ ಅಧಿಸೂಚನೆಯು ತಕ್ಷಣದಿಂದಲೇ ಜಾರಿಗೆ ಬರುತ್ತದೆ.

ಕ್ರ.ಸಂ.	ನೋಂದಣಿ ಪ್ರಾಧಿಕಾರ	ನೋಂದಣಿ ಸೂಚಿ ಸಂಖ್ಯೆ
1	2	3
1	ಪ್ರಾದೇಶಿಕ ಸಾರಿಗೆ ಕಛೇರಿ, ಬೆಂಗಳೂರು (ಆಟೋರಿಕ್ಷಾ ರಹದಾರಿ ಮತ್ತು ರಾಜ್ಯ ಸಾರಿಗೆ ನಿಗಮಗಳು)	57

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಆರ್. ಪ್ರಭುಶಂಕರ್,

ಪೀಠಾಧಿಕಾರಿ, ಸಾರಿಗೆ ಇಲಾಖೆ

ಪಿ.ಆರ್. 1447

ಸಾರಿಗೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಾರಿಇ 34 ವಾಈಸೇ 2011, ಬೆಂಗಳೂರು, ದಿನಾಂಕ : 15/17ನೇ ಅಕ್ಟೋಬರ್, 2011

ರಸ್ತೆ ಸಾರಿಗೆ ನಿಗಮಗಳ ಅಧಿನಿಯಮ 1950ರ (1950ರ ಕೇಂದ್ರ ಅಧಿನಿಯಮ 64) ಕಲಂ 5 ಉಪಕಲಂ (2)ರಲ್ಲಿ ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ನಿಯಮಾವಳಿಗಳು 1961ರ ನಿಯಮ 3(3)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ವಿಶೇಷಾಧಿಕಾರಿ (ಜಿಲ್ಲಾ ಪಂಚಾಯತ್) ಹಾಗೂ ಪದನಿಮಿತ್ತ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರನ್ನು ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಗುಲಬರ್ಗಾ, ಮಂಡಳಿಯ ನಿರ್ದೇಶಕರನ್ನಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ರಾಮಚಂದ್ರ,

ಸರ್ಕಾರದ ಅಧೀನ ಕಾರ್ಯದರ್ಶಿ, ಸಾರಿಗೆ ಇಲಾಖೆ

ಪಿ.ಆರ್. 1448

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಲಾ 157 ಎಲ್ಎಜಿ 2011, ಬೆಂಗಳೂರು, ದಿನಾಂಕ : 19ನೇ ಅಕ್ಟೋಬರ್, 2011

ಜಿಲ್ಲಾ ಸರ್ಕಾರಿ ವಕೀಲರು, ರಾಯಚೂರು ಜಿಲ್ಲೆ, ಇವರಿಗೆ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಹಿರಿಯ ಶ್ರೇಣಿ ನ್ಯಾಯಾಲಯದಲ್ಲಿ ಸರ್ಕಾರದ ನಿರುದ್ಧ ದಾಖಲಾಗುವ ಸಿವಿಲ್ ಪ್ರಕರಣಗಳಲ್ಲಿಯೂ ಸಹ ಹಾಜರಾಗುವಂತೆ ಸೂಚಿಸಲಾಗಿದೆ.

ಸದರಿ ವಕೀಲರು ಹೆಚ್ಚುವರಿ ಪ್ರಭಾರೆಯಾಗಿ ಕಾರ್ಯನಿರ್ವಹಿಸುವ ಅವಧಿಯಲ್ಲಿ ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು, 1977ರ ನಿಯಮ 15(I)(II)ರನ್ವಯ ಪ್ರಯಾಣ ಭತ್ಯೆ ಪಡೆಯಲು ಅರ್ಹರಾಗಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎನ್. ರಾಮೇಗೌಡ,

ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ–1),

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

ಪಿ.ಆರ್. 1449

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಲಾ 138 ಎಲ್ಎಜಿ 2011, ಬೆಂಗಳೂರು, ದಿನಾಂಕ : 19ನೇ ಅಕ್ಟೋಬರ್, 2011

ಶ್ರೀ ರಮೇಶ್ ಶಂಕರ್ ಕೋಲಕಾರ, ವಕೀಲರು, ಇವರನ್ನು ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳ 1977ರನ್ವಯ ದಿನಾಂಕ : 25–09–2011ರಿಂದ ಜಾರಿಗೆ ಬರುವಂತೆ ಮೂರು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಹಿರಿಯ ಶ್ರೇಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಯಲ್ಲಿ ಮುಂದುವರೆಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎನ್. ರಾಮೇಗೌಡ,

ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ–1),

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

ಪಿ.ಆರ್. 1450

ವಾಣಿಜ್ಯ ಮತ್ತು ಕೈಗಾರಿಕೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ವಾಕೈ 171 ಕೈಸೇವಿ 2011, ಬೆಂಗಳೂರು, ದಿನಾಂಕ : 15ನೇ ಅಕ್ಟೋಬರ್, 2011

ಶ್ರೀ ಕೆ. ಶಾಂತವೀರಪ್ಪ, ಉಪ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ನೇಮಕಾತಿ ನಿರೀಕ್ಷಣೆಯಲ್ಲಿರುವ ಇವರನ್ನು ಉಪ ನಿರ್ದೇಶಕರು (ಖಾಗ್ರಾ) ಜಿಲ್ಲಾ ಪಂಚಾಯತ್, ಕೊಪ್ಪಳ ಇಲ್ಲಿ ಖಾಲಿ ಇರುವ ಉಪ ನಿರ್ದೇಶಕರ ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸ್ಥಳ ನಿಯಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಲ್. ಎಸ್. ವಾಸನ್,
ಸರ್ಕಾರದ ಅಧೀನ ಕಾರ್ಯದರ್ಶಿ,
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಸೇವೆಗಳು)

ಪಿ.ಆರ್. 1451

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಆಕುಕ 159 ಐಎಂಎಂ 2011, ಬೆಂಗಳೂರು, ದಿನಾಂಕ : 26ನೇ ಸೆಪ್ಟೆಂಬರ್, 2011

ಔಷಧ ನಿಯಂತ್ರಣ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಈ ಕೆಳಕಂಡ ಗ್ರೂಪ್–ಎ ಪತ್ರಾಂಕಿತ ಅಧಿಕಾರಿಗಳು 2012ನೇ ಕ್ಯಾಲೆಂಡರ್ ವರ್ಷದಲ್ಲಿ ನಿವೃತ್ತಿ ಹೊಂದಲಿರುವುದರಿಂದ ಹಾಗೂ ಅವರ ಹೆಸರಿನ ಮುಂದೆ ಸೂಚಿಸಿರುವ ದಿನಾಂಕದಂದು 60 ವರ್ಷ ವಯಸ್ಸು ಪೂರ್ಣಗೊಳ್ಳುವುದರಿಂದ, ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 95(1) ರನ್ವಯ ಸದರಿಯವರಿಗೆ ಸರ್ಕಾರಿ ಸೇವೆಯಿಂದ ವಯೋ ನಿವೃತ್ತಿ ಹೊಂದಲು ಈ ಕೆಳಕಂಡ ಷರತ್ತಿಗೊಳಪಡಿಸಿ ಸರ್ಕಾರವು ಈ ಮೂಲಕ ಅನುಮತಿ ನೀಡಿ ಆದೇಶಿಸಿದೆ.

ಕ್ರಮ ಸಂಖ್ಯೆ	ಅಧಿಕಾರಿಗಳ ಹೆಸರು ಹಾಗೂ ಪದನಾಮ (ಶ್ರೀ/ಶ್ರೀಮತಿ)	ಜನ್ಮ ದಿನಾಂಕ	ವಯೋ ನಿವೃತ್ತಿ ಹೊಂದಲಿರುವ ದಿನಾಂಕ
1	ಎ. ಪಿ. ಕೃಷ್ಣಮೂರ್ತಿ, ಸಹಾಯಕ ಔಷಧ ನಿಯಂತ್ರಕರು, ಉಡುಪಿ ವೃತ್ತ, ಉಡುಪಿ.	04–01–1952	31–01–2012
2	ಜಿ. ಆರ್. ರಾಮನಗೌಡರ್, ಉಪ ಔಷಧ ನಿಯಂತ್ರಕರು (ಸ್ವಪ್ರ.), ಪ್ರಾದೇಶಿಕ ಕಛೇರಿ, ಹುಬ್ಬಳ್ಳಿ–ಧಾರವಾಡ, ಹುಬ್ಬಳ್ಳಿ.	14–04–1952	30–04–2012

ಸದರಿ ಅಧಿಕಾರಿಗಳ ವಿರುದ್ಧ ಯಾವುದಾದರೂ ನ್ಯಾಯಾಂಗ ತನಿಖೆ/ಇಲಾಖಾ ವಿಚಾರಣೆ ಇತ್ಯಾದಿ ಬಾಕಿ ಇದ್ದಲ್ಲಿ ಹಾಗೂ ಹೂಡಲು ಉದ್ದೇಶಿಸಿದ್ದಲ್ಲಿ ನಿವೃತ್ತಿ ಸೌಲಭ್ಯವನ್ನು ತಡೆ ಹಿಡಿಯುವ ಹಾಗೂ ಸರ್ಕಾರಕ್ಕೆ ಯಾವುದೇ ಬೇಬಾಕಿ ಬರಬೇಕಾಗಿದ್ದಲ್ಲಿ ಅದನ್ನು ಸದರಿಯವರಿಂದ ವಸೂಲಿ ಮಾಡುವ ಷರತ್ತಿಗೊಳಪಟ್ಟು ಈ ಅಧಿಸೂಚನೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಆರ್. ಎಸ್. ಇಟಗಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ಭಾರತೀಯ ವೈದ್ಯ ಪದ್ಧತಿ)

ಪಿ.ಆರ್. 1452

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ತಿದ್ದುಪಡಿ

ಸಂಖ್ಯೆ: ಆಕುಕ 202 ಆರ್‌ಜಿಯು 2011, ಬೆಂಗಳೂರು, ದಿನಾಂಕ : 29ನೇ ಸೆಪ್ಟೆಂಬರ್, 2011

ಸರ್ಕಾರದ ಅಧಿಸೂಚನೆ ಸಂಖ್ಯೆ : ಆಕುಕ 52 ಆರ್‌ಜಿಯು 2011, ದಿನಾಂಕ : 23–05–2011ನ್ನು ಕೆಳಕಂಡಂತೆ ತಿದ್ದಿ ಓದಿಕೊಳ್ಳತಕ್ಕದ್ದು.

"ಡಾ॥ ವಸಂತ ಕಾಮತ್, ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರು, ವೈದ್ಯಶಾಸ್ತ್ರ ವಿಭಾಗ, ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ, ಬೆಂಗಳೂರು ಇವರನ್ನು ದಿನಾಂಕ 27–05–2011 ರಿಂದ ದಿನಾಂಕ 30–09–2011ರವರೆಗೆ ಪ್ರತಿ ನಿಯೋಜನೆ ಆಧಾರದ ಮೇಲೆ ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ ಇಲ್ಲಿನ ನಿರ್ದೇಶಕರ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸಲು ನೇಮಿಸಲಾಗಿದೆ.

ಮುಂದುವರಿದು, ಸದರಿಯವರನ್ನು ದಿನಾಂಕ 01–10–2011 ರಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಒಟ್ಟು 03 (ಮೂರು) ವರ್ಷಗಳ ಅವಧಿಗೆ (ಪ್ರತಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸಿದ ದಿನಾಂಕ 23–05–2011 ರಿಂದ 30–09–2011ರವರೆಗಿನ ಅವಧಿಯನ್ನೊಳಗೊಂಡಂತೆ) ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರಾಗಿ ನೇಮಿಸಲಾಗಿದೆ."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ. ಕೆ. ಭೈರಪ್ಪ,
ಸರ್ಕಾರದ ಅಧೀನ ಕಾರ್ಯದರ್ಶಿ–2,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ)

ಪಿ.ಆರ್. 1453

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಗ್ರಾಅಪ/143/ಇತರೆ/2011, ಬೆಂಗಳೂರು, ದಿನಾಂಕ : 12ನೇ ಅಕ್ಟೋಬರ್, 2011

ಕೇಂದ್ರ ಸರ್ಕಾರದ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿ ಮಂತ್ರಾಲಯದ ದಿನಾಂಕ 30–07–2004ರ ಸೂಚನೆಯನ್ನು ಅನುಸರಿಸಿ ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದಂತೆ ಕಾಲೋಚಿತಗೊಳಿಸಿದ ನಾಗರೀಕ ಸನ್ನದನ್ನು ಸಾರ್ವಜನಿಕರ ಮಾಹಿತಿಗಾಗಿ ಈ ಮೂಲಕ ಪ್ರಕಟಿಸಲಾಗಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನಾಗರೀಕ ಸನ್ನದು

ಕರ್ನಾಟಕ ರಾಜ್ಯದ ಗಣನೀಯ ಪ್ರಮಾಣದ ಜನಸಂಖ್ಯೆಯು ಗ್ರಾಮೀಣ ಪ್ರದೇಶಗಳಲ್ಲಿ ವಾಸಿಸುತ್ತಿದ್ದು ಇವರೆಲ್ಲರ ಜೀವನ ಗುಣಮಟ್ಟವನ್ನು ಹೆಚ್ಚಿಸುವುದೇ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಮುಖ ಧ್ಯೇಯವಾಗಿದೆ. ಇದನ್ನು ಸಾಧಿಸುವ ನಿಟ್ಟಿನಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ನ್ನು ಜಾರಿಗೆ ತರಲಾಗಿದ್ದು, ಸದರಿ ಅಧಿನಿಯಮದನ್ವಯ ರಾಜ್ಯದ ಗ್ರಾಮೀಣ ಪ್ರದೇಶದ ಆಡಳಿತದಲ್ಲಿ ಪ್ರಜಾಪ್ರಭುತ್ವದ ವಿಕೇಂದ್ರೀಕರಣ ಅಂದರೆ ಜಿಲ್ಲಾ, ತಾಲ್ಲೂಕು ಹಾಗು ಗ್ರಾಮ ಮಟ್ಟದಲ್ಲಿ ಸ್ಥಳೀಯ ಸ್ವಯಂ ಆಡಳಿತ ವ್ಯವಸ್ಥೆಯನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕ್ರಮವಹಿಸಲಾಗಿದೆ. ಈ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳ ಹಾಗು ಈ ಸಂಬಂಧ ಸಂಪರ್ಕಿಸಬೇಕಾದ ಅಧಿಕಾರಿಗಳ ವಿವರಗಳು ಈ ಕೆಳಕಂಡಂತಿವೆ :–

ಕ್ರಮ ಸಂಖ್ಯೆ	ಕಾರ್ಯಕ್ರಮಗಳ ವಿವರಗಳು	ಸಂಪರ್ಕಿಸಬೇಕಾದ ಅಧಿಕಾರಿಗಳ ಪದನಾಮ	ವಿಳಾಸ ಹಾಗೂ ದೂರವಾಣಿ ಸಂಖ್ಯೆ ಮತ್ತು ಇ–ಮೇಲ್ ವಿಳಾಸ
1	ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಗ್ರಾಮೀಣ ಪ್ರದೇಶದ ಅಕುಶಲ ದೈಹಿಕ ಕೆಲಸ ಮಾಡಲು ಇಚ್ಛಿಸುವ ವಯಸ್ಕರಿಗೆ ವರ್ಷದಲ್ಲಿ ಕನಿಷ್ಠ 100 ದಿನಗಳ ಉದ್ಯೋಗಾವಕಾಶವನ್ನು ಕಲ್ಪಿಸಿ ಲಿಂಗ ಬೇಧವಿಲ್ಲದೆ ಸಮಾನ ಕೂಲಿಯನ್ನು ನೀಡಿ ತನ್ಮೂಲಕ ಗ್ರಾಮೀಣ ಜನರ ಹಾಗು ಪ್ರದೇಶದ ಅಭಿವೃದ್ಧಿಯನ್ನು ಮಾಡುವ ಕಾರ್ಯಕ್ರಮ.	ನಿರ್ದೇಶಕರು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ.	2ನೇ ಮಹಡಿ, 3ನೇ ಗೇಟ್, ಬಹುಮಹಡಿ ಕಟ್ಟಡ, ಬೆಂಗಳೂರು. 080–22372738, 22032238 nregs-ka@nic.in

ಕ್ರಮ ಸಂಖ್ಯೆ	ಕಾರ್ಯಕ್ರಮಗಳ ವಿವರಗಳು	ಸಂಪರ್ಕಿಸಬೇಕಾದ ಅಧಿಕಾರಿಗಳ ಪದನಾಮ	ವಿಳಾಸ ಹಾಗೂ ದೂರವಾಣಿ ಸಂಖ್ಯೆ ಮತ್ತು ಇ–ಮೇಲ್ ವಿಳಾಸ
2	ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆ, ಸರ್ವ ಕುಟುಂಬ ಸಮೀಕ್ಷೆ, ಜೀತ ಕಾರ್ಮಿಕರ ವಿಮುಕ್ತಿ, ಮಹಿಳಾ ಸಬಲೀಕರಣ, ಗ್ರಾಮೀಣ ವ್ಯಾಪಾರ ಸಮೂಹ (Rural Business Hubs)	ನಿರ್ದೇಶಕರು, ಸ್ವಯಂ ಉದ್ಯೋಗ ಯೋಜನೆ,	2ನೇ ಮಹಡಿ, 3ನೇ ಗೇಟ್, ಬಹುಮಹಡಿ ಕಟ್ಟಡ, ಬೆಂಗಳೂರು. 080–22257341 karsgsy@gmail.com
3	ರಸ್ತೆಗಳು, ಸೇತುವೆ, ಸಣ್ಣ ನೀರಾವರಿ ಯೋಜನೆಗಳು, ಕೆರೆಗಳು, ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ, ಮುಖ್ಯಮಂತ್ರಿ ಗ್ರಾಮ ಸಡಕ್ ಯೋಜನೆ, ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಯೋಜನೆ, ನಬಾರ್ಡ್, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ವಿಷಯಗಳು. ಕೇಂದ್ರ ಹಣಕಾಸು ಆಯೋಗದ ಅನುದಾನದ ಯೋಜನೆಗಳು, ನಕ್ಸಲ್ ಬಾಧಿತ ಪ್ರದೇಶಾಭಿವೃದ್ಧಿ ವಿಷಯಗಳು.	ನಿರ್ದೇಶಕರು, ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಯೋಜನೆ (1)	3ನೇ ಮಹಡಿ, 3ನೇ ಗೇಟ್, ಬಹುಮಹಡಿ ಕಟ್ಟಡ, ಬೆಂಗಳೂರು. 080–22254479, 22032574 director.ri@gmail.com
4	ಗ್ರಾಮೀಣ ಇಂಧನ ಕಾರ್ಯಕ್ರಮ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಸೌರಬೆಳಕು, ಜೈವಿಕ ಇಂಧನ, ಸುವರ್ಣ ಗ್ರಾಮೋದಯ, ಪಶ್ಚಿಮ ಘಟ್ಟ ಅಭಿವೃದ್ಧಿ ಯೋಜನೆ, ಹಿಂದುಳಿದ ಪ್ರದೇಶಗಳ ಅನುದಾನ ನಿಧಿ ಯೋಜನೆ.	ನಿರ್ದೇಶಕರು, ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಯೋಜನೆ (2)	2ನೇ ಮಹಡಿ, 3ನೇ ಗೇಟ್, ಬಹುಮಹಡಿ ಕಟ್ಟಡ, ಬೆಂಗಳೂರು.
5	ರಾಜ್ಯದಲ್ಲಿ ಅನುಷ್ಠಾನಗೊಳಿಸುತ್ತಿರುವ ಎಲ್ಲಾ ನೀರು ಸರಬರಾಜು ಯೋಜನೆಗಳು, ವಿಶ್ವ ಬ್ಯಾಂಕ್ ನೆರವಿನ ಜಲನಿರ್ಮಲ ಯೋಜನೆ, ಗ್ರಾಮೀಣ ನೈರ್ಮಲ್ಯ, ನಿರ್ಮಲ ಗ್ರಾಮ ಯೋಜನೆ, ಸಂಪೂರ್ಣ ಸ್ವಚ್ಛತಾ ಆಂದೋಲನ, ರಾಜ್ಯ ನೀರು ಮತ್ತು ನೈರ್ಮಲ್ಯ ಅಭಿಯಾನ, ಕೇಂದ್ರ ಹಣಕಾಸು ಆಯೋಗದ ಕುಡಿಯುವ ನೀರಿನ ಯೋಜನೆಗಳು.	ನಿರ್ದೇಶಕರು, ಹಾಗೂ ಪದನಿಮಿತ್ತ ಜಂಟಿ ಕಾರ್ಯದರ್ಶಿಗಳು ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಅಭಿಯಾನ	2ನೇ ಮಹಡಿ, ಕಾವೇರಿ ಭವನ ಬೆಂಗಳೂರು. 080–22240508 director@krwssa.org
6	(i) ಕರ್ನಾಟಕ ಪಂ.ರಾಜ್ ಅಧಿನಿಯಮ, 1993ರ ಅನುಷ್ಠಾನ ಹಾಗು ಸದರಿ ಕಾಯ್ದೆಗೆ ತರಬಹುದಾದ ತಿದ್ದುಪಡಿ ಇತ್ಯಾದಿ (ii) ಕರ್ನಾಟಕ ಸಾಮಾನ್ಯ ಸೇವೆ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ)ಗೆ ಸೇರಿದ ಅಧೀನದ ಸೇವೆಗಳ ವೃಂದಗಳಾದ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗ್ರಾಮೀಣಾಭಿವೃದ್ಧಿ ಸಹಾಯಕ ಹಾಗು ಗ್ರಾಮ ಪಂಚಾಯತ್ ಕಾರ್ಯದರ್ಶಿ ಗ್ರೇಡ್–1 ಮತ್ತು ಗ್ರೇಡ್–2 ಇತ್ಯಾದಿ ಸೇವಾ ಹಾಗು ಇತರ ಸಂಬಂಧಿಸಿದ ವಿಷಯಗಳು. (iii) ಕೇಂದ್ರ ಹಣಕಾಸು ಆಯೋಗದ ಅನುದಾನ (ಪಂ.ರಾಜ್ ಸಂಸ್ಥೆಗಳಿಗೆ ಮುಕ್ತ ಅನುದಾನ) ಹಾಗು ಶಾಸನಬದ್ಧ ಅನುದಾನಗಳ ಬಿಡುಗಡೆ.	ನಿರ್ದೇಶಕರು (ಪಂ. ರಾಜ್)	328, 3ನೇ ಮಹಡಿ, 2ನೇ ಗೇಟ್, ಬಹುಮಹಡಿ ಕಟ್ಟಡ, ಬೆಂಗಳೂರು. 080–22353925, 22032533 pr.kar@nic.in

ಕ್ರಮ ಸಂಖ್ಯೆ	ಕಾರ್ಯಕ್ರಮಗಳ ವಿವರಗಳು	ಸಂಪರ್ಕಿಸಬೇಕಾದ ಅಧಿಕಾರಿಗಳ ಪದನಾಮ	ವಿಳಾಸ ಹಾಗೂ ದೂರವಾಣಿ ಸಂಖ್ಯೆ ಮತ್ತು ಇ–ಮೇಲ್ ವಿಳಾಸ
7	ಡಾ॥ ಡಿ. ಎಂ. ನಂಜುಂಡಪ್ಪ ವರದಿಯಲ್ಲಿ ಗುರುತಿಸಿದ 14 ಜಿಲ್ಲೆಗಳ ಅತ್ಯಂತ ಹಿಂದುಳಿದ 39 ತಾಲ್ಲೂಕುಗಳ ವ್ಯಾಪ್ತಿಯ 1341 ಗ್ರಾಮ ಪಂಚಾಯತಿಗಳಿಗೆ ಮುಕ್ತ ಅನುದಾನ ಬಿಡುಗಡೆ ಗ್ರಾಮಗಳ ಅಭಿವೃದ್ಧಿ ಮತ್ತು 176 ತಾಲ್ಲೂಕುಗಳಲ್ಲಿ ಸಾಮರ್ಥ್ಯ ಸೌಧ ನಿರ್ಮಾಣ.	ಮುಖ್ಯಸ್ಥರು, ಗ್ರಾಮ ಸ್ವರಾಜ್ ಯೋಜನೆ	6ನೇ ಮಹಡಿ, ಎಂ.ಎಸ್.ಐ.ಎಲ್. ಕಟ್ಟಡ, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು. 080–22372027, 22372029 chief-gsp-kabn@kar.nic.in
8	ಇಲ್ಲಿ ಇಂಧನದ ಸಂರಕ್ಷಣೆ, ಮಳೆ ನೀರು ಕೊಯ್ಲು ಕುರಿತು ಪಂಚಾಯತಿ ಪ್ರತಿನಿಧಿಗಳಿಗೆ ತರಬೇತಿ, ಕಾರ್ಯಾಗಾರ ಏರ್ಪಡಿಸುವುದು.	ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ.	ಎಂ.ಜಿ.ಐ.ಆರ್.ಇ.ಡಿ. ಜಕ್ಕೂರು, ಬೆಂಗಳೂರು 080–26326359
9	ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಮೈಸೂರು ಇಲ್ಲಿ ಪಂ.ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳು/ ಅಧಿಕಾರಿಗಳು/ಸಿಬ್ಬಂದಿಗಳು/ಬ್ಯಾಂಕ್ ಅಧಿಕಾರಿಗಳು/ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿಗಳಿಗೆ ತರಬೇತಿ ನೀಡುವುದು.	ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆ.	ಲಲಿತ ಮಹಲ್ ರಸ್ತೆ, ಮೈಸೂರು 0821–2447732 dir-sird-kamy@nic.in
10	ಕರ್ನಾಟಕ ವಿಕಾಸ, ಅಭಿವೃದ್ಧಿಗೆ ಸಂಬಂಧಿಸಿದ ಲೇಖನಗಳು, ಯಶೋಗಾಥೆಗಳು, ಪಂ.ರಾಜ್ ಸಂಸ್ಥೆಗಳಿಗೆ ಸಂಬಂಧಿಸಿದ ಸುಧಾರಣೆಗಳು, ಇಲಾಖೆಯ ಇಲ್ಲಾ ಸುತ್ತೋಲೆಗಳನ್ನು ಈ ಪತ್ರಿಕೆಯಲ್ಲಿ ಅಳವಡಿಸಿ ಪಂ.ರಾಜ್ ಸಂಸ್ಥೆಗಳಿಗೆ, ಚಂದಾದಾರರಿಗೆ, ಸಂಸತ್ ಸದಸ್ಯರಿಗೆ, ಶಾಸಕರಿಗೆ ಪ್ರತಿ ತಿಂಗಳು ರವಾನಿಸುವುವುದು.	ಮುಖ್ಯ ಸಂಪಾದಕರು	3ನೇ ಮಹಡಿ, 1ನೇ ಗೇಟ್, ಬಹುಮಹಡಿ ಕಟ್ಟಡ, ಬೆಂಗಳೂರು 080–22353857 kvrdpr@gmail.com

ಮೇಲಿನ ವಿವಿಧ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳ ಕುರಿತಂತೆ ಜಿಲ್ಲಾ, ತಾಲ್ಲೂಕು ಹಾಗು ಗ್ರಾಮ ಮಟ್ಟಗಳಲ್ಲಿ ಕ್ರಮವಾಗಿ ಆಯಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಸಂಪರ್ಕಿಸಬಹುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್. ಯು. ಶಿವಪ್ಪ,
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪಿ.ಆರ್. 1454

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಆರ್‌ಡಿ 255 ಎಎಸ್‌ಡಿ 2011, ಬೆಂಗಳೂರು, ದಿನಾಂಕ : 12ನೇ ಅಕ್ಟೋಬರ್, 2011

ಶ್ರೀ ಎಂ. ವೆಂಕಟಪ್ಪ, ಹಿಂದಿನ ಶಿರಸ್ತೇದಾರ್, ಹಾಲಿ ತಹಶೀಲ್ದಾರ್, ಮೊಣಕಾಲ್ಮೂರು ಇವರು ದಿ: 09–01–2003 ರಿಂದ 19–03–2003ರವರೆಗೆ ಅಮಾನತ್ತಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 99 ಹಾಗೂ 100 ರನ್ವಯ ಕರ್ತವ್ಯದ ಅವಧಿಯೆಂದು ಪರಿಗಣಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎನ್. ಗೋಪಾಲಯ್ಯ,
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಸೇವೆಗಳು–3)

ಪಿ.ಆರ್. 1455